ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 11-12-2020

# ಪ್ರಾಣಿಗಳಿಂದ ಬೆಳೆ ಹಾನಿ; ಅಷ್ಟೇ ಪ್ರಮಾಣದ ಪರಿಹಾರ ನೀಡಿ

ವಿಶ್ವ 11-12-20

**ವಿಧಾನಸಭೆ:** ಆನೆ ಸೇರಿದಂತೆ ಕಾಡು ಪ್ರಾಣಿಗಳಿಂದ ಬೆಳೆ ಹಾನಿ ಆಗಿರುವ ಪ್ರಮಾಣದಷ್ಟು ಪರಿಹಾರ ನೀಡುವಂತೆ ಸರಕಾರಕ್ಕೆ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಸಲಹೆ ಮಾಡಿದರು. ವಿಧಾನಸಭೆಯಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಶಾಸಕ ಎಂ.ಪಿ.ಕುಮಾರ ಸ್ವಾಮಿ ಅವರ ಪ್ರಶ್ನೆಗೆ ಅರಣ್ಯ ಸಚಿವರ ಪರವಾಗಿ ನಗರಾಭಿವೃದ್ಧಿ ಸಚಿವ ಬೈರತಿ ಬಸವರಾಜ್ ಉತ್ತರಿಸುತ್ತಿದ್ದ ಸಂದರ್ಭದಲ್ಲಿ ಮಧ್ಯ ಪ್ರವೇಶಿಸಿದ ಸಭಾಧ್ಯಕ್ಷರು, ರಾಜ್ಯದೆಲ್ಲೆಡೆ ಆನೆ ಸೇರಿ ಕಾಡು ಪ್ರಾಣಿಗಳ ಹಾವಳಿ ಮಿತಿ ಮೀರಿದೆ. ರೈತರು ಬೆಳೆದ ಬೆಳೆ ಕೈಗೆ ಬಂದದ್ದು, ಬಾಯಿಗೆ ಬರ ದಂತಾಗಿದೆ. ಮಲೆನಾಡಿನಲ್ಲಿ ಕಾಡು ಪ್ರಾಣಿ ಹಾವಳಿ ಹೆಚ್ಚಾಗಿದೆ. ಹೆಚ್ಚು ಪರಿಹಾರ ಕೊಡಬೇಕು. 10 ಚೀಲದಷ್ಟು ನಷ್ಟವಾಗಿದ್ದರೆ, ಅಷ್ಟೇ ಪ್ರಮಾಣದ ಪರಿಹಾರವನ್ನು ತ್ವರಿತವಾಗಿ ಕೊಡಿ. ರೈತರು ಬೆಳೆ ಕಳೆದುಕೊಂಡು ಹತಾಷರಾಗಿದ್ದಾರೆ ಎಂದರು. ಇದಕ್ಕೂ ಮುನ್ನ ಮಾತನಾಡಿದ ಎಂ.ಪಿ.ಕುಮಾರ ಸ್ವಾಮಿ, ಅತಿವೃಷ್ಟಿ ಹಾಗೂ ಆನೆ ಹಾವಳಿಯಿಂದಾಗಿ 500 ಎಕರೆ ಪ್ರದೇಶ ಪಾಳು ಬಿದ್ದಿದೆ. ಆ ಜಮೀನಿಗೂ ಪರಿಹಾರ ಕೊಡಬೇಕೆಂದು ಒತ್ತಾಯಿಸಿದರು.

